**ಪಿರಿಯಾಪಟ್ಟಣ ತಾಲ್ಲೂಕಿನಲ್ಲಿರುವ ಸರ್ಕಾರಿ ಆಸ್ಪತ್ರೆಗಳಲ್ಲಿ ಖಾಲಿ ಇರುವ ಹುದ್ದೆಗಳ ಭರ್ತಿ**

275 - ಶ್ರೀ ಬಸವರಾಜು ಹೆಚ್.ಸಿ. (ಪಿರಿಯಾಪಟ್ಟಣ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಪಿರಿಯಾಪಟ್ಟಣ ತಾಲ್ಲೂಕಿನಲ್ಲಿ ಇರುವ ಸರ್ಕಾರಿ ಆಸ್ಪತ್ರೆಗಳ ಸಂಖ್ಯೆ ಎಷ್ಟು?*

ಆ) *ಅವುಗಳ ಪೈಕಿ ವೈದ್ಯರ ಹುದ್ದೆಗಳು ಖಾಲಿ ಇರುವ ಆಸ್ಪತ್ರೆಗಳ ಸಂಖ್ಯೆ ಎಷ್ಟು?*

ಇ) *ಸದರಿ ಆಸ್ಪತ್ರೆಗಳಲ್ಲಿ ಖಾಲಿ ಇರುವ ಹುದ್ದೆಗಳನ್ನು ಭರ್ತಿಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು?*

ಡಾ॥ ಎ.ಬಿ. ಮಾಲಕರೆಡ್ಡಿ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) 21

ಆ) 4

ಇ) ಕರ್ನಾಟಕ ಆರೋಗ್ಯ ಅಭಿವೃದ್ಧಿ ಸಂಸ್ಥೆ ಅಡಿಯಲ್ಲಿ 573 ವೈದ್ಯರನ್ನು ನೇಮಕ ಮಾಡುವ ಬಗ್ಗೆ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಈಗಾಗಲೇ ಪ್ರಕಟಿಸಲಾಗಿದ್ದು, ನೇಮಕಾತಿ ಆದೇಶಗಳನ್ನು ಹೊರಡಿಸುವ ಸಂದರ್ಭದಲ್ಲಿ ಖಾಲಿ ಹುದ್ದೆಗಳನ್ನು ತುಂಬಲಾಗುವುದು, ಪರಿಶೋಧನೆಯ ಪ್ರಕ್ರಿಯೆ ಮುಗಿದ ನಂತರ ಕೂಡಲೇ ನೇಮಕಾತಿ ಆದೇಶ ಹೊರಡಿಸಲಾಗುವುದು.

**ಪಿರಿಯಾಪಟ್ಟಣ ಸಾರ್ವಜನಿಕ ಆಸ್ಪತ್ರೆಯನ್ನು ಮೇಲ್ದರ್ಜೆಗೇರಿಸುವುದು**

276 - ಶ್ರೀ ಬಸವರಾಜು ಹೆಚ್.ಸಿ. (ಪಿರಿಯಾಪಟ್ಟಣ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಪಿರಿಯಾಪಟ್ಟಣದ ಸಾರ್ವಜನಿಕ ಆಸ್ಪತ್ರೆಯಲ್ಲಿ ಕೇವಲ 30 ಹಾಸಿಗೆಗಳನ್ನು ಹೊಂದಿರುವುದರಿಂದ ರೋಗಿಗಳಿಗೆ ತುಂಬಾ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?*

ಆ) *ಹಾಗಿದ್ದಲ್ಲಿ, ಸದರಿ ಆಸ್ಪತ್ರೆಯನ್ನು 100 ಹಾಸಿಗೆಗಳ ಆಸ್ಪತ್ರೆಯನ್ನಾಗಿ ಮೇಲ್ದರ್ಜೆಗೇರಿಸಲು ಸರ್ಕಾರದ ಕ್ರಮ ತೆಗೆದುಕೊಳ್ಳುವುದೇ?*

ಡಾ॥ ಎ.ಬಿ. ಮಾಲಕರೆಡ್ಡಿ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ಬಂದಿಲ್ಲ.

ಆ) ಉದ್ಭವಿಸುವುದಿಲ್ಲ.